ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

186 (266) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ 3 ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯಿಂದ ಹಾಸನ ಜಿಲ್ಲೆಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಕಾಮಗಾರಿಗಳನ್ನು ಪಡೆದಿರುವ ಗುತ್ತಿಗೆದಾರರು/ಏಜೆನ್ಸಿಗಳ ವಿವರ ನೀಡುವುದು; ಈ ಕಾಮಗಾರಿಗಳು ಪ್ರಸ್ತುತ ಯಾವ ಯಾವ ಹಂತದಲ್ಲಿವೆ; ಈ ಕಾಮಗಾರಿಗಳಿಗಾಗಿ ಜನವರಿ-2020ರವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಯ ಕಾಮಗಾರಿಗಳು ಕಳಪೆ ಗುಣಮಟ್ಟ ಹೊಂದಿವೆಯೆಂದು ಸಾರ್ವಜನಿಕರಿಂದ ದೂರುಗಳು ಬಂದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ಕಾಮಗಾರಿಗಳನ್ನು ನಿರ್ವಹಿಸಿರುವ ಗುತ್ತಿಗೆದಾರರು/ಏಜೆನ್ಸಿಗಳು ಮತ್ತು ಕಾಮಗಾರಿಗಳ ಮೇಲ್ವಿಚಾರಣೆ ವಹಿಸಿರುವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ? (ಪ್ರಕರಣವಾರು ವಿವರ ನೀಡುವುದು)